# ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ, ಮೈಸೂರು ಜಿಲ್ಲೆ, ಮೈಸೂರು ರವರ ನಡವಳಿಗಳು

ವಿಷಯ: ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019)ಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟಲು ಸರ್ಕಾರದ ಆದೇಶದಂತೆ Home Quarantine ಆದಂತಹ ವ್ಯಕ್ತಿಗಳ ಮೇಲೆ ನಿಗಾ ಇಡಲು ಕ್ರಮವಹಿಸುವ ಬಗ್ಗೆ

ಉಲ್ಲೇಖ:
1. ಕರ್ನಾಟಕ ಸಾಂಕ್ರಾಮಿಕ ರೋಗಗಳು, COVID-19 ರೆಗ್ಯೂಲೇಷನ್ಸ್ -2020ರ ಅಧಿಸೂಚನೆ ಸಂಖ್ಯೆ: ಹೆಚ್.ಎಫ್,ಡಬ್ಲ್ಯೂ,54 ಸಿ ಜಿ ಎಂ 2020 ದಿನಾಂಕ: 11.03.2020.
2. ಸರ್ಕಾರದ ಕಂದಾಯ ಇಲಾಖೆಯ ಆದೇಶ ಸಂಖ್ಯೆ: ಆರ್.ಡಿ.157 ಟಿ ಎನ್ ಆರ್ 2020, ದಿನಾಂಕ:14.03.2020
3. ಮಾನ್ಯ ಕಂದಾಯ ಸಚಿವರು ಕರ್ನಾಟಕ ಸರ್ಕಾರ ರವರ ಪತ್ರದ ಸಂಖ್ಯೆ: ಕಂ.ಸ 678 / 2020 ದಿನಾಂಕ: 18.03.2020

*****

ಪ್ರಸ್ತಾವನೆ:

ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ COVID-19 ಸೋಂಕು ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಹಾಗೂ ವೈಯಕ್ತಿಕ ಮತ್ತು ಸಮುದಾಯದ ತುರ್ತು ಪರಿಸ್ಥಿತಿಯನ್ನು ಎದುರಿಸಲು ಈಗಾಗಲೇ ಕ್ರಮಗಳನ್ನು ತೆಗೆದುಕೊಳ್ಳಲಾಗಿರುತ್ತದೆ. ಮಾನ್ಯ ಕಂದಾಯ ಸಚಿವರು ಕರ್ನಾಟಕ ಸರ್ಕಾರ ರವರು ಉಲ್ಲೇಖ (3) ರ ಪತ್ರದಲ್ಲಿ ಆರೋಗ್ಯ ಇಲಾಖೆಯ ಸಮನ್ವಯದೊಂದಿಗೆ ಜಿಲ್ಲೆಯಲ್ಲಿ COVID-19 ರ ನಿಯಂತ್ರಣಕ್ಕೆ ಅಗತ್ಯವಾದ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲು ಮತ್ತು ಕೊರೊನಾ ಸೋಂಕಿತ ಶಂಕಿತ ವ್ಯಕ್ತಿಗಳಿಗೆ ಮತ್ತು ಕುಟುಂಬದವರಿಗೆ ಗೌರವಯುತವಾದ ಆರೈಕೆಯನ್ನು ಮತ್ತು ಮಾನಸಿಕ ಸಾಮಾಜಿಕ ಬೆಂಬಲವನ್ನು ನೀಡುವುದರೊಂದಿಗೆ ಆರೋಗ್ಯ ಮತ್ತು ಇತರ ಸಿಬ್ಬಂದಿಗಳ ಸುರಕ್ಷತೆಗೆ ಸೂಕ್ತ ಕ್ರಮ ವಹಿಸಲು ನಿರ್ದೇಶಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಕೊರೋನಾ ವೈರಾಣು (COVID-19) ಹರಡದಂತೆ ಶಂಕಿತ ಸೋಂಕಿತರನ್ನು ಸದರಿಯವರ ಗೃಹದಲ್ಲಿ ಅಥವಾ ಜಿಲ್ಲಾ ಕೇಂದ್ರದಲ್ಲಿ ತೆರೆಯಲಾಗಿರುವ Quarantine Camp ಗಳಲ್ಲಿ ಇರಿಸಿ ಅವರುಗಳ ಮೇಲೆ ನಿಗಾ ವಹಿಸಲು ಕ್ರಮ ಜರುಗಿಸಲಾಗುತ್ತಿದೆ. ಅಂತಹ ಶಂಕಿತ ವ್ಯಕ್ತಿಗಳು ಕಡ್ಡಾಯವಾಗಿ Home Quarantine ಅಥವಾ ಸರ್ಕಾರದಿಂದ ತೆರೆಯಲಾಗಿರುವ Quarantine Camp ನಲ್ಲಿ ನಿಗದಿಪಡಿಸಿದ ಅವಧಿಯಲ್ಲಿ ಇರಬೇಕಾಗಿದ್ದು, ಯಾವುದೇ ಕಾರಣಕ್ಕೂ Home Quarantine / Quarantine Camp ನಿಂದ ಹೊರ ಬಂದಲ್ಲಿ ಕೊರೋನಾ ವೈರಾಣು ಸಾರ್ವಜನಿಕರಲ್ಲಿ / ಸೋಂಕಿತರಲ್ಲದವರಲ್ಲಿ ಹರಡುವ ಸಾಧ್ಯತೆ ಹೆಚ್ಚಾಗಿರುತ್ತದೆ. ಈ ಹಿನ್ನಲೆಯಲ್ಲಿ Home Quarantine ನಲ್ಲಿ ಇರುವಂತಹ ವ್ಯಕ್ತಿಗಳು ಹೊರಬಾರದಂತೆ ಅವರುಗಳ ಮೇಲೆ ನಿಗಾ ಇರಿಸುವ ದೃಷ್ಟಿಯಿಂದ ಸ್ಥಳೀಯ ಅಧಿಕಾರಿಗಳು ಮತ್ತು ಸಂಬಂಧಪಟ್ಟ ಸ್ಥಳೀಯ ಪ್ರಾಧಿಕಾರಗಳ ಅಧಿಕಾರಿ ಮತ್ತು ಸಿಬ್ಬಂದಿಗಳ ಸೇವೆಯನ್ನು ಬಳಸಿಕೊಳ್ಳುವುದು ಸೂಕ್ತವೆಂದು ಕಂಡುಬಂದ ಕಾರಣ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## ಆದೇಶ

MYSDC/MAG1/MLO/71(6)/2020(E-95753) ದಿನಾಂಕ: 20-03-2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಅಭಿರಾಮ್ ಜಿ ಶಂಕರ್, ಭಾ.ಆ.ಸೇ. ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಯಾದ ನಾನು ಕರ್ನಾಟಕ ಸಾಂಕ್ರಾಮಿಕ ರೋಗಗಳು, COVID-19 ರೆಗ್ಯೂಲೇಷನ್ಸ್-2020ರ ನಿಯಮ 12 ರಲ್ಲಿ ಹಾಗೂ Disaster Management Act 2005 ಕಲಂ 24(a),(b), 30(2) ರಡಿಯಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಇರುವಂತಹ ಮೈಸೂರು ಮಹಾನಗರ ಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು / ಕಂದಾಯ ಅಧಿಕಾರಿಗಳು / ರೆವಿನ್ಯೂ ಇನ್ಸ್ ಪೆಕ್ಟರ್ಸ್ ಮತ್ತು ಬಿಲ್ ಕಲೆಕ್ಟರ್ಸ್, ಗ್ರಾಮ ಪಂಚಾಯತ್ ಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು / ಬಿಲ್ ಕಲೆಕ್ಟರ್,

........2

ಜಿಲ್ಲಾಧಿಕಾರಿಗಳ ಕಾರ್ಯಾಲಯ ಮೈಸೂರು ಜಿಲ್ಲೆ

Scanned with CamScanner

ಕಂದಾಯ ಇಲಾಖೆಯ ರಾಜಸ್ವ ನಿರೀಕ್ಷಕರು ಮತ್ತು ಗ್ರಾಮ ಲೆಕ್ಕಿಗರು ಅವರುಗಳ ವ್ಯಾಪ್ತಿಯಲ್ಲಿ Home Quarantine ನಲ್ಲಿರುವ ವ್ಯಕ್ತಿಗಳ ಸಂಬಂಧ ನಿಗಾ ವಹಿಸಲು ಹಾಗೂ ಸಂಬಂಧಪಟ್ಟ ಆರೋಗ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದ ರೀತ್ಯಾ ಅಗತ್ಯವಾದ ಕ್ರಮವಹಿಸಲು ಹಾಗೂ ಮಾಹಿತಿ ನೀಡಲು ನಿಯೋಜಿಸಿ ಆದೇಶಿಸಿದೆ.

ಈ ಆದೇಶವನ್ನು ನನ್ನ ಸಹಿ ಮತ್ತು ಮೊಹರಿನೊಂದಿಗೆ ಈ ದಿನ ದಿನಾಂಕ: 20 03.2020 ರಂದು ಹೊರಡಿಸಿದೆ.

20/3/20.

(ಅಭಿರಾಮ್ ಜಿ.ಶಂಕರ್)
ಜಿಲ್ಲಾಧಿಕಾರಿ
ಹಾಗೂ ಜಿಲ್ಲಾ ದಂಡಾಧಿಕಾರಿ
ಮೈಸೂರು ಜಿಲ್ಲೆ, ಮೈಸೂರು

ಪ್ರತಿಯನ್ನು:-ಕೆಳಕೆಂಡವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

1. ಪೋಲೀಸ್ ಆಯುಕ್ತರು, ಮೈಸೂರು ನಗರ, ಮೈಸೂರು.
2. ಪೋಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಮೈಸೂರು
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು
4. ಡೀನ್, ಮೈಸೂರು ವೈದ್ಯಕೀಯ ಮಹಾವಿದ್ಯಾಲಯ, ಮೈಸೂರು
5. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.
6. ಜಿಲ್ಲಾ ಶಸ್ತ್ರ ಚಿಕಿತ್ಸಕರು, ಮೈಸೂರು ಜಿಲ್ಲೆ, ಮೈಸೂರು
7. ಉಪವಿಭಾಗಾಧಿಕಾರಿಗಳು, ಮೈಸೂರು/ಹುಣಸೂರು ಉಪವಿಭಾಗ.
8. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಮೈಸೂರು.
9. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳು
10. ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
11. ಉಪ ನಿರ್ದೇಶಕರು, ವಾರ್ತಾ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರಿಗೆ ಕಳುಹಿಸುತ್ತಾ ದೈನಂದಿನ ಪತ್ರಿಕೆಗಳಲ್ಲಿ ಮೇಲ್ಕಂಡ ವಿಷಯವನ್ನು ಸುದ್ದಿರೂಪದಲ್ಲಿ ಪ್ರಕಟಿಸಲು ಕೋರಿದೆ.
12. ನಿಲಯ ನಿರ್ದೇಶಕರು, ಆಕಾಶವಾಣಿ, ಯಾದವಗಿರಿ, ಮೈಸೂರು ಇವರಿಗೆ ಮಾಹಿತಿಗೆ ಮತ್ತು ನಿಲಯದ ಮೂಲಕ ವಿಷಯ ಪ್ರಕಟಿಸುವ ಸಲುವಾಗಿ.

ಜಿಲ್ಲಾಧಿಕಾರಿಗಳ ಕಾರ್ಯಾಲಯ ಮೈಸೂರು ಜಿಲ್ಲೆ

Scanned with CamScanner